ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ    ದಿನಾಂಕ : DATE : 11/10/2019

# ಡಿಕೆಶಿ ಕ್ಷೇತ್ರದ ಗಣಿಗಾರಿಕೆ: ಸಮಗ್ರ ವರದಿಗೆ ಸೂಚನೆ

## ಮಾಜಿ ಸಚಿವ ಡಿಕೆಶಿ, ಸೋದರ ಸುರೇಶ್‌ಗೆ ಹೊಸ ಸಂಕಷ್ಟ

## ಗಣಿ, ಅರಣ್ಯ ಒತ್ತುವರಿ ತಡೆಗೆ ಏನು ಮಾಡಿದ್ದೀರಿ: ಕೋರ್ಟ್

• ಕನ್ನಡಪ್ರಭ ವಾರ್ತೆ ಬೆಂಗಳೂರು 11/10/19

ಮಾಜಿ ಸಚಿವ ಡಿ.ಕೆ.ಶಿವಕುಮಾರ್ ಮತ್ತು ಸಂಸದ ಡಿ.ಕೆ.ಸುರೇಶ್ ಅವರ ಒಡೆತನದ ಕಂಪನಿಗಳೂ ಸೇರಿದಂತೆ ಇನ್ನಿತರ ಸಂಸ್ಥೆಗಳು ರಾಮನಗರ ಜಿಲ್ಲೆಯ ಕನಕಪುರ ಮತ್ತು ಸಾತನೂರು ವ್ಯಾಪ್ತಿಯ ಸಂರಕ್ಷಿತ ಅರಣ್ಯ ಪ್ರದೇಶದಲ್ಲಿ ನಡೆಸಿವೆ ಎನ್ನಲಾದ ಅಕ್ರಮ ಗಣಿಗಾರಿಕೆ ಮತ್ತು ಅರಣ್ಯ ಒತ್ತುವರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಈವರೆಗೆ ಕೈಗೊಂಡಿರುವ ಎಲ್ಲ ಕ್ರಮಗಳ ಬಗ್ಗೆ ಸಮಗ್ರ ವರದಿ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಗುರುವಾರ ನಿರ್ದೇಶಿಸಿದೆ.



### 64 ಮಂದಿ ಪ್ರತಿವಾದಿಗಳು

ಅರ್ಜಿಯಲ್ಲಿ ಡಿ.ಕೆ.ಶಿವಕುಮಾರ್, ಪತ್ನಿ ಉಷಾ ಶಿವಕುಮಾರ್ ಮತ್ತು ಸಹೋದರ ಡಿ.ಕೆ.ಸುರೇಶ್ ಶಿವಕುಮಾರ್ ಸೇರಿದಂತೆ ಒಟ್ಟು 64 ಪ್ರತಿವಾದಿಗಳಿದ್ದಾರೆ. ಅವರ ವಿರುದ್ಧ ಅಕ್ರಮ ಗಣಿಗಾರಿಕೆ, ಅರಣ್ಯ ನಾಶ ಮತ್ತು ಅರಣ್ಯ ಗಡಿ ಒತ್ತುವರಿ ಮಾಡಿ ಖಜಾನೆಗೆ ನಷ್ಟ ಉಂಟುಮಾಡಿದಂತಹ ಹಲವು ಗುರುತರ ಆರೋಪ ಮಾಡಲಾಗಿದೆ.

ಡಿ.ಕೆ.ಶಿವಕುಮಾರ್, ಸಂಸದ ಡಿ.ಕೆ.ಸುರೇಶ್ ಮತ್ತವರ ಕುಟುಂಬ ಸದಸ್ಯರಿಗೆ ಸೇರಿದ ಕಂಪನಿಗಳು ಕನಕಪುರ ಹಾಗೂ ಸಾತನೂರು ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ಮತ್ತು ಅರಣ್ಯ ನಾಶ ನಡೆಸಿ ಸರ್ಕಾರದ ಖಜಾನೆಗೆ ನಷ್ಟ ಉಂಟು ಮಾಡಿವೆ. ಈ ಪ್ರಕರಣಗಳನ್ನು ಸಿಬಿಐ ತನಿಖೆಗೆ ಆದೇಶಿಸಬೇಕೆಂದು ಕೋರಿ ಕನಕಪುರ ತಾಲ್ಲೂಕಿನ ಬಿ.ಸಿ.ನಾರಾಯಣ ಸ್ವಾಮಿ ಹಾಗೂ ಎ.ಸಿ.ಶಿವರಾಜು 2103ರಲ್ಲಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕ ನೇತೃತ್ವದ ವಿಭಾಗೀಯ ಪೀಠ ಗುರವಾರ ವಿಚಾರಣೆ ನಡೆಸಿತು.

ಅರ್ಜಿಗೆ ಸರ್ಕಾರವು 2015ರ ಫೆ.7ರಂದು ಅರ್ಜಿಗೆ ಆಕ್ಷೇಪಣೆ ಸಲ್ಲಿಸಿದೆ. ಆ ನಂತರ ಪ್ರಕರಣ ಸಂಬಂಧ ಈವರೆಗೆ ಏನೆಲ್ಲಾ ಬೆಳವಣಿಗೆಗಳು ನಡೆದಿವೆ? ಆರೋಪಿಗಳಾಗಿರುವ ಅರಣ್ಯ ಇಲಾಖೆ 22 ಅಧಿಕಾರಿಗಳ ವಿರುದ್ಧ ಇಲಾಖೆ ನಡೆಸಲಾಗಿದೆಯೇ? ಅವರ ವಿರುದ್ಧ ಯಾವುದಾದರೂ ಕ್ರಮ ಕೈಗೊಳ್ಳಲಾಗಿದೆ? ಎಷ್ಟು ಪ್ರಮಾಣದ ಅರಣ್ಯ ಪ್ರದೇಶ ಒತ್ತುವರಿ ಆಗಿದೆ? ಅದರಲ್ಲಿ ಎಷ್ಟನ್ನು ತೆರವುಗೊಳಿಸಲಾಗಿದೆ? ಈ ವಿಚಾರದಲ್ಲಿ ಮಾಜಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ. ಯು.ವಿ.ಸಿಂಗ್ ನೇತೃತ್ವದ ಸಮಿತಿ ಸಲ್ಲಿಸಿದ ವರದಿ ಆಧರಿಸಿ ಯಾವ ಕ್ರಮ ಜರುಗಿಸಲಾಗಿದೆ? ಎಂಬುದರ ಕುರಿತು ಡಿ.5ರೊಳಗೆ ಸಮಗ್ರ ವರದಿ ಸಲ್ಲಿಸುವಂತೆ ಸರ್ಕಾರಕ್ಕೆ ನ್ಯಾಯಪೀಠ ಸೂಚಿಸಿತು.

ಅರ್ಜಿದಾರರ ಪರ ಹಿರಿಯ ವಕೀಲ ಎನ್.ದೇವದಾಸ್ ವಾದಿಸಿ, ಕನಕಪುರ ಮತ್ತು ಸಾತನೂರು ವ್ಯಾಪ್ತಿಯ 63 ಗ್ರಾಮಗಳ 684 ಗಣಿ ಪ್ರದೇಶಗಳನ್ನು ಮಾಜಿ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಡಾ. ಯು.ವಿ.ಸಿಂಗ್ ಅವರ ನೇತೃತ್ವದ ಸಮಿತಿ ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿತ್ತು. ಸಂರಕ್ಷಿತ ಮತ್ತು ವನ್ಯಜೀವಿಗಳ ಅರಣ್ಯ ಪ್ರದೇಶಗಳಲ್ಲಿ ಅಕ್ರಮ ನಡೆಸಲಾಗಿದೆ, ಇದರಿಂದ ಸರ್ಕಾರದ ಖಜಾನೆಗೆ ಕೋಟ್ಯಂತರ ಹಣ ನಷ್ಟವಾಗಿದೆ ಎಂದು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದು ವಿವರಿಸಿದರು.

ಅಲ್ಲದೆ, ಈ ಅಕ್ರಮಗಳಿಗೆ ಸಂಬಂಧಿಸಿದಂತೆ 2006-2007ರಲ್ಲಿ ಒಟ್ಟು 67 ಜನರ ವಿರುದ್ಧ ಸಿಐಡಿ ತನಿಖೆ ನಡೆದಿದೆ. ಅರಣ್ಯ ಇಲಾಖೆಯ 22 ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ ನಡೆಯುತ್ತಿದೆ. ಕೆಲವು ಪ್ರಕರಣಗಳಲ್ಲಿ ದೋಷಾರೋಪ ಪಟ್ಟಿಯನ್ನೂ ಸಲ್ಲಿಸಲಾಗಿದೆ. ಆದರೆ ಈವರೆಗೂ ಯಾವುದೇ ಪ್ರಗತಿಯಾಗಿಲ್ಲ. ಆದ ಕಾರಣ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ನ್ಯಾಯಪೀಠವನ್ನು ಕೋರಿದರು.

11